<u>**: ಜೆ.ಡಿ.ಎಸ್. ಕೋರ್ ಕಮಿಟಿ ಮಾರ್ಗಸೂಚಿಗಳು :**</u>

ಕರ್ನಾಟಕ ಪ್ರದೇಶ ಜಾತ್ಯತೀತ ಜನತಾದಳ ಸದ್ಯ 11 ಸದಸ್ಯರ ಕೋರ್ ಕಮಿಟಿಯನ್ನು ರಚಿಸಿದೆ. ಈ ಸಮಿತಿಗೆ ಸಂಚಾಲಕರೊಬ್ಬರನ್ನು ನೇಮಿಸುವ ಮೂಲಕ ಸಮಿತಿಯ ಸಭೆ ಕರೆದು ಪಕ್ಷದ ರಾಜಕೀಯ ನಿಲುವು, ಒಲವು ಹಾಗೂ ಪಕ್ಷ ಸಂಘಟನೆಯ ಬಗ್ಗೆ ವಿಸ್ತೃತ ಚರ್ಚೆ ನಡೆಸಿ, ನಡಾವಳಿಯ ನಿರ್ಧಾರವನ್ನು ಅನುಷ್ಠಾನಗೊಳಿಸುವ ಅಧಿಕಾರ ನೀಡಲಾಗಿದೆ.

ಈ ಕೋರ್ ಕಮಿಟಿಯು ಪ್ರತಿ ತಿಂಗಳು ಕಡ್ಡಾಯವಾಗಿ ಸಭೆ ಸೇರುವುದು, ವಿಷಯಾಧರಿತ ತುರ್ತು ಸಂಧರ್ಭದಲ್ಲಿ ತಕ್ಷಣವೇ ಸಭೆ ಸೇರುವುದು. ವಿಶೇಷ ಸಂಧರ್ಭಗಳಲ್ಲಿ ಕೋರ್ ಕಮಿಟಿ ಸದಸ್ಯರು ಪರಸ್ಪರ ದೂರವಾಣಿ ಮೂಲಕ ಚರ್ಚಿಸಿ ದಿಡೀರ್ ವಿದ್ಯಮಾನಗಳ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸುವುದು. ಪಕ್ಷದ ಬಲವರ್ಧನೆಗೆ ಸಂಬಂಧಿಸಿದಂತೆ ವಿಷಯ ಪ್ರಸ್ತಾಪಿಸಿ ಸಂಘಟನಾತ್ಮಕವಾಗಿ ಹಾಗೂ ಸಾಮೂಹಿಕ ನಾಯಕತ್ವದಲ್ಲಿ ಪಕ್ಷವನ್ನು ತಳಮಟ್ಟದಿಂದ ಕಟ್ಟಲು ಕಾರ್ಯಸೂಚಿ ರೂಪಿಸಿ ಅನುಷ್ಠಾನಗೊಳಿಸುವುದು. ಈ ಕೋರ್ ಕಮಿಟಿಯ ಸಭೆಯನ್ನು ಬೆಂಗಳೂರಿಗೆ ಸೀಮಿತಗೊಳಿಸದೆ ಬೆಳಗಾವಿ, ಕಲಬುರ್ಗಿ, ಹುಬ್ಬಳ್ಳಿ, ಮಂಗಳೂರು, ಮೈಸೂರು ನಗರಗಳಲ್ಲಿ ಕೋರ್ ಕಮಿಟಿ ಸಭೆ ನಡೆಸುವ ಮೂಲಕ ಪ್ರಾದೇಶಿಕವಾರು ಪಕ್ಷ ಸಂಘಟನೆಗೆ ಒತ್ತು ನೀಡುವುದು.

ಜಿಲ್ಲಾವಾರು ಪ್ರವಾಸದ ವೇಳೆ ಕೋರ್ ಕಮಿಟಿಯ ಸಭೆಗೆ ಆಯಾ ಜಿಲ್ಲೆಯ ಪಕ್ಷದ ಶಾಸಕರು ವಿಶೇಷ ಆಹ್ವಾನಿತರಾಗಿರುತ್ತಾರೆ.

ಪಕ್ಷದ ಸಂಸಧೀಯ ಮಂಡಳಿ ಹಾಗೂ ರಾಜಕೀಯ ವ್ಯವಹಾರಗಳ ಸಮಿತಿಯೊಂದಿಗೆ ಕೋರ್ ಕಮಿಟಿಯು ಕಾಲಕಾಲಕ್ಕೆ ಸಭೆ ಸೇರಿ ಪಕ್ಷದ ವಿದ್ಯಮಾನಗಳ ಬಗ್ಗೆ ಚರ್ಚಿಸುವುದು. ಪಕ್ಷವು ಸದನದ ಒಳಗೆ ಮತ್ತು ಹೊರಗೆ ಸಾರ್ವಜನಿಕ ಹಿತಾಸಕ್ತಿಯ ವಿಷಯಗಳ ಮೇಲೆ ಹೋರಾಟದ ರೂಪುರೇಷೆ ನಿರ್ಧರಿಸುವ ಬಗ್ಗೆ ಶಾಸಕಾಂಗ ಪಕ್ಷಕ್ಕೆ ಸೂಕ್ತ ಮಾರ್ಗದರ್ಶನ ನೀಡುವುದು.

ಪಕ್ಷದ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳು ಮತ್ತು ಪರಾಜಿತ ಅಭ್ಯರ್ಥಿಗಳೊಂದಿಗೆ ನಿಕಟ ಸಂಪರ್ಕ ಸಾಧಿಸುವುದು. ಪಕ್ಷದ ಬಲವರ್ಧನೆಗೆ ವಿಷಯಾಧರಿತವಾಗಿ ಕಾಲಕಾಲಕ್ಕೆ ಮಾರ್ಗದರ್ಶನ ನೀಡುವುದು. ಜನರ

ಸಮಸ್ಯೆಗಳ ಬಗ್ಗೆ ಹೋರಾಟದ ರೂಪುರೇಷೆ ನಿರ್ಧರಿಸಿ, ಏಕಕಾಲಕ್ಕೆ ರಾಜ್ಯಾದ್ಯಂತ ಪ್ರತಿಭಟನೆಯ ವೇದಿಕೆ ರೂಪಿಸುವುದು.

ಪ್ರಸಕ್ತ ನೇಮಕ ಮಾಡಲಾಗಿರುವ ಕೋರ್ ಕಮಿಟಿಯ 11 ಮಂದಿ ಸದಸ್ಯರ ಸಂಖ್ಯೆಯನ್ನು ಪ್ರಾದೇಶಿಕ ಹಾಗೂ ಜಾತಿವಾರು, ಮಹಿಳಾ ಪ್ರಾತಿನಿಧ್ಯ ಕಲ್ಪಿಸುವ ಹಿನ್ನೆಲೆಯಲ್ಲಿ ಹಿಗ್ಗಿಸಬಹುದಾಗಿದೆ. ಕೋರ್ ಕಮಿಟಿಯು ನಿಯಮಿತವಾಗಿ ಸಭೆ ಸೇರಿ ಪಕ್ಷದ ಎಲ್ಲಾ ವಿದ್ಯಮಾನಗಳನ್ನು ಪರಿಶೀಲಿಸಿ, ಮುಕ್ತವಾಗಿ ಚರ್ಚಿಸಿದ ನಂತರ ಒಟ್ಟಾರೆ ಮೂಡಿಬಂದ ಒಮ್ಮತಾಭಿಪ್ರಾಯವನ್ನು ಪಕ್ಷದ ರಾಜ್ಯಾಧ್ಯಕ್ಷರು ಹಾಗೂ ರಾಷ್ಟ್ರೀಯ ಅಧ್ಯಕ್ಷರ ಗಮನಕ್ಕೆ ತರುವುದು. ಪಕ್ಷ ಸಂಘಟನೆ ಮತ್ತು ರಾಜಕೀಯ ನಿರ್ಧಾರಗಳನ್ನು ತೆಗೆದುಕೊಳ್ಳುವುದಲ್ಲದೇ ಪಕ್ಷದ ವಿವಿಧ ನಾಯಕರ ಮಧ್ಯೆ ಅಭಿಪ್ರಾಯ ಭೇದ, ವಿರಸ ಉಂಟಾಗಿದ್ದರೆ ಅದನ್ನು ಸರಿಪಡಿಸುವ ಮಹತ್ತರ ಜವಾಬ್ದಾರಿ ನೀಡಲಾಗಿದೆ.

ಏನೇ ಭಿನ್ನಾಭಿಪ್ರಾಯಗಳು ಎದುರಾದರೂ ಹಿರಿಯ ಹಾಗೂ ಕಿರಿಯ ನಾಯಕರ ನಡುವೆ ಸಮನ್ವಯತೆ ಮೂಡಿಸುವ ಹಾಗೂ ಅತೃಪ್ತಿ ಶಮನಗೊಳಿಸುವ ಹೊಣೆಗಾರಿಕೆ ಹೊಂದಿದೆ.

ಚುನಾವಣಾ ಸಂಧರ್ಭಗಳಲ್ಲಿ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಗೆ ಮೊದಲು ತಾಲ್ಲೂಕು ಹಾಗೂ ಜಿಲ್ಲಾ ಘಟಕಗಳಿಂದ ಸಂಭವನೀಯ ಅಭ್ಯರ್ಥಿಗಳ ಪಟ್ಟಿಯನ್ನು ಕಡ್ಡಾಯವಾಗಿ ತರಿಸಿಕೊಳ್ಳುವುದು ನಂತರ ಕೋರ್ ಕಮಿಟಿ ಸಭೆಯಲ್ಲಿ ಚರ್ಚಿಸಿ ಒಮ್ಮತದ ನಿರ್ಧಾರ ತೆಗೆದುಕೊಳ್ಳುವುದು.

ಅನ್ಯ ಪಕ್ಷದ ನಾಯಕರು ಪಕ್ಷ ಸೇರ್ಪಡೆಗೆ ಮುಂದಾದಾಗ ಸ್ಥಳೀಯ ಘಟಕಗಳ ಅಭಿಪ್ರಾಯ ಪಡೆದು, ಕೋರ್ ಕಮಿಟಿಯಲ್ಲಿ ಚರ್ಚಿಸಿ ಅಂತಿಮ ನಿರ್ಧಾರ ತೆಗೆದುಕೊಳ್ಳುವುದು. ಪಕ್ಷದ ನಾಯಕರು ಶಿಸ್ತಿನ ಗಡಿ ದಾಟಿದರೆ ಅಂತಹವರ ವಿರುದ್ದ ಶಿಸ್ತು ಕ್ರಮ ಕೈಗೊಳ್ಳಲು ಈ ಸಮಿತಿ ಚರ್ಚಿಸಿ ಅಂತಿಮ ನಿರ್ಧಾರ ತೆಗೆದುಕೊಳ್ಳುವುದು.

ಪಕ್ಷ ಸಂಘಟನೆಗೆ ನಿಯಮಿತವಾಗಿ ರಾಜ್ಯ ಪ್ರವಾಸ ನಡೆಸಬೇಕು. ಈ ವೇಳೆ ಕೋರ್ ಕಮಿಟಿಯ ಅರ್ಧದಷ್ಟು ಸದಸ್ಯರು ಭಾಗಿಯಾಗುವುದು. ಪ್ರತಿ ಕೋರ್ ಕಮಿಟಿ ನಂತರ ವಕ್ತಾರರೊಬ್ಬರು ಮಾಧ್ಯಮಗಳಿಗೆ ಮಾಹಿತಿ ನೀಡುವುದು. ಚುನಾವಣಾ ಹೊಂದಾಣಿಕೆ,

ಪಕ್ಷದ ಅಭ್ಯರ್ಥಿಗಳ ಆಯ್ಕೆ, ಪಕ್ಷದ ಪ್ರಣಾಳಿಕೆ ಬಗ್ಗೆ ಕೋರ್ ಕಮಿಟಿಯಲ್ಲಿ ಚರ್ಚಿಸಿ ಅಂತಿಮ ನಿರ್ಣಯ ಕೈಗೊಳ್ಳುವುದು.

ಪಕ್ಷದ ವಿವಿಧ ಘಟಕಗಳಿಗೆ ಮಾರ್ಗದರ್ಶನ, ತರಬೇತಿ ಹಾಗೂ ಕಾಲಕಾಲಕ್ಕೆ ರಾಜಕೀಯ ಹೋರಾಟಗಳನ್ನು ರೂಪಿಸುವುದು.

ಮಹಿಳಾ ಘಟಕ, ಕಾರ್ಮಿಕ ಘಟಕ, ಕಾನೂನು ಘಟಕ, ವಿಕಲಚೇತನರ ಘಟಕ, ವೈದ್ಯ ಘಟಕ, ನೇಕಾರರು ಮತ್ತು ಕುಶಲಕರ್ಮಿಗಳ ಘಟಕ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಠ ಪಂಗಡಗಳ ಘಟಕ, ಸೈನಿಕ ಘಟಕ, ಅಲ್ಪಸಂಖ್ಯಾತರ ಘಟಕ, ಹಿಂದುಳಿದ ವರ್ಗಗಳ ಘಟಕ ಸೇರಿದಂತೆ ಎಲ್ಲಾ ವಿಭಾಗಗಳಿಗೂ ಕಾಲಕಾಲಕ್ಕೆ ಸಲಹೆ ನೀಡುವ ಮೂಲಕ ಕ್ರಿಯಾಶೀಲವಾಗಿರುವಂತೆ ನಿಗಾ ವಹಿಸುವುದು.

ವಿಭಾಗವಾರು ಸಭೆ ನಡೆಸುವ ಕೋರ್ ಕಮಿಟಿ ಸರ್ಕಾರದ ಯೋಜನೆಗಳ ಅನುಷ್ಠಾನದ ಲೋಪ ಹಾಗೂ ಭ್ರಷ್ಠಾಚಾರದ ಬಗ್ಗೆ ಪಕ್ಷದ ಕಾರ್ಯಕರ್ತರಿಗೆ, ನಾಯಕರಿಗೆ ಮನವರಿಕೆ ಮಾಡಿಕೊಡುವುದಲ್ಲದೇ ಮಾಧ್ಯಮಗಳಿಗೂ ಮಾಹಿತಿ ನೀಡುವುದು.